## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1194 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ |
| ಉತ್ತರಿಸುವ ದಿನಾಂಕ | : | 13-03-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಸಿಂಧನೂರು ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ಒಟ್ಟು 5 ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಮಂಜೂರಾದ ಸಂಖ್ಯೆಗಿಂತ ಹೆಚ್ಚಿನ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">
ಹೌದು.
ಸಿಂಧನೂರು ತಾಲ್ಲೂಕಿನಲ್ಲಿ 03 ಡಾ|| ಬಿ.ಆರ್ ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯಗಳು ಹಾಗೂ 02 ಡಾ|| ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಗಳು ಸೇರಿದಂತೆ ಒಟ್ಟು 05 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.
ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ/87/ಸಮನ್ವಯ 2013, ದಿನಾಂಕ:20.07.2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸಿರುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.
ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಮತ್ತು ಪ್ರವೇಶಾತಿ ವಿವರ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ವಿದ್ಯಾರ್ಥಿ ನಿಲಯ</th><th>ಮಂಜೂರಾತಿ ಸಂಖ್ಯೆ</th><th>ದಾಖಲಾತಿ ಸಂಖ್ಯೆ</th></tr>
<tr><td>1</td><td>ಡಾ|| ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಡಿಗ್ರಿ ಬಾಲಕರ ವಿದ್ಯಾರ್ಥಿ ನಿಲಯ, ಸಿಂಧನೂರು</td><td>100</td><td>212</td></tr>
<tr><td>2</td><td>ಡಾ|| ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಡಿಗ್ರಿ ಬಾಲಕರ ವಿದ್ಯಾರ್ಥಿ ನಿಲಯ, ಸಿಂಧನೂರು.</td><td>200</td><td>274</td></tr>
<tr><td>3</td><td>ಡಾ|| ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಡಿಗ್ರಿ ಬಾಲಕಿಯರ ವಿದ್ಯಾರ್ಥಿ ನಿಲಯ, ಸಿಂಧನೂರು.</td><td>100</td><td>461</td></tr>
<tr><td>4</td><td>ಡಾ|| ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿ ನಿಲಯ, ಸಿಂಧನೂರು.</td><td>100</td><td>358</td></tr>
<tr><td>5</td><td>ಡಾ|| ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಪದವಿ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಸಿಂಧನೂರು.</td><td>100</td><td>295</td></tr>
<tr><td></td><td>ಒಟ್ಟು</td><td>600</td><td>1600</td></tr>
</table>
</td></tr>
<tr><td>(ಆ)</td><td>ಒಂದು ವಿದ್ಯಾರ್ಥಿ ನಿಲಯದ ಮಂಜೂರಾತಿ ಸಾಮರ್ಥ್ಯ 100 ವಿದ್ಯಾರ್ಥಿಗಳು ಮಾತ್ರ ಆಗಿದ್ದು, ಅದಕ್ಕಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td></tr>
</table>

| | | |
|---|---|---|
| | | ಇಲಾಖಾ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾದಲ್ಲಿ, ವಿದ್ಯಾರ್ಥಿ ನಿಲಯಗಳ ಕಟ್ಟಡದ ಗರಿಷ್ಠ ಸಾಮರ್ಥ್ಯದ ಅನುಸಾರ (Permissible Strength) ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ. ಅದಾಗ್ಯೂ ಹೆಚ್ಚಿನ ಅರ್ಜಿಗಳು ಸ್ವೀಕೃತವಾದಲ್ಲಿ ಬಾಡಿಗೆ ಕಟ್ಟಡವನ್ನು ಪಡೆದು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.<br><br>ಇದರಂತೆ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿಯನ್ನು ನಿರ್ವಹಿಸಲು ಸರ್ಕಾರದ ಆದೇಶ ಸಂಖ್ಯೆ:SWD/372/STP/2022 ದಿನಾಂಕ:18.03.2023 ಹೊರಡಿಸಲಾಗಿದೆ.<br><br>ಸಿಂಧನೂರು ತಾಲ್ಲೂಕಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾತಿ ಸಂಖ್ಯೆಯು ಅನುಮತಿ ಪಡಿಸಲಾದ ಸಂಖ್ಯೆಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ, ಹೆಚ್ಚುವರಿ 01 ಸ್ವಂತ ಕಟ್ಟಡ ಹಾಗೂ 03 ಬಾಡಿಗೆ ಕಟ್ಟಡದ ಮೂಲಕ ನಿರ್ವಹಣೆ ಮಾಡಲಾಗುತ್ತಿದೆ. |
| ಇ) | ಬಂದಿದ್ದಲ್ಲಿ, ಈ ಸಂಬಂಧ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ರಾಯಚೂರು ಇವರಿಂದ ವರದಿ ಪಡೆದು ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವ ಸಂಬಂಧ ಸರ್ಕಾರದ ನಿಲುವೇನು; | ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಗಾಗಿ ನಿಗದಿತ ನಮೂನೆಯಲ್ಲಿ ಜಿಲ್ಲೆಯ ಸಕ್ಷಮ ಪ್ರಾಧಿಕಾರಿಗಳಾದ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಮೂಲಕ ನಿಗದಿತ ನಮೂನೆಯಲ್ಲಿ ಪ್ರಸ್ತಾವನೆ ಪಡೆದು, ಆದ್ಯತೆ ಮೇಲೆ ನಿಯಮಾನುಸಾರ ಪರಿಶೀಲಿಸಲಾಗುವುದು. |
| (ಈ) | ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿಗೆ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸಲು ಸರ್ಕಾರದಿಂದ ಮಂಜೂರಾತಿ ನೀಡಲಾಗುವುದು? | |

**ಸಕಇ 244 ಪಕವಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**